**ಕರ್ನಾಟಕ ವಿಧಾನ ಪರಿಷತ್ತು**

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೇಶವ ಪ್ರಸಾದ್ ಎಸ್. ಇವರು ನಿಯಮ 72 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ: ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಗೆ ಹೊಂದಿಕೊಂಡಿರುವ ಹುಲಿಮಂಗಲ ಗ್ರಾಮ ಪಂಚಾಯತಿ ವ್ಯಾಪ್ತಿಯ ಶಿಕಾರಿಪಾಳ್ಯ ಕಸದ ಕೊಂಪೆಯಾಗಿದ್ದು, ಎಲ್ಲೆಂದರಲ್ಲಿ ಕಸದ ರಾಶಿ ಕಾಣುತ್ತಿದೆ. ಈ ಬಗ್ಗೆ ಗ್ರಾಮ ಪಂಚಾಯತಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿರುವ ಬಗ್ಗೆ ಮಾಧ್ಯಮಗಳಲ್ಲಿ ಸುದ್ದಿಯಾಗಿದೆ. ಅಲ್ಲದೆ ಶಿಕಾರಿಪಾಳ್ಯ ಮೂಲ ಸೌಕರ್ಯದಲ್ಲೂ ತುಂಬಾ ಹಿಂದುಳಿದಿದೆ. ಇದರಿಂದ ಶಿಕಾರಿಪಾಳ್ಯದ ನಿವಾಸಿಗಳು ದಿನನಿತ್ಯ ಗೋಳಾಡುತ್ತಿದ್ದಾರೆ.**

*****

**ಉತ್ತರ :** ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಹುಲಿಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಿಕಾರಿಪಾಳ್ಯ ಗ್ರಾಮಕ್ಕೆ ಹೊಂದಿಕೊಂಡಂತೆ ವಸತಿ ಸಮುಚ್ಚಯಗಳು (Aportments), ಪಿ.ಜಿ.ಗಳು, ವಾಣಿಜ್ಯ ಕಟ್ಟಡಗಳು ಯಥೇಚ್ಛವಾಗಿದ್ದು, ಈ ಎಲ್ಲಾ ಕಟ್ಟಡಗಳ ತ್ಯಾಜ್ಯವನ್ನು ಅನಧಿಕೃತವಾಗಿ ರಾತ್ರೋ ರಾತ್ರಿ ಎಲ್ಲೆಂದರಲ್ಲಿ ಹಾಗೂ ರಸ್ತೆಯ ಬದಿಗಳಲ್ಲಿ ಹಾಕುತ್ತಿರುವ ಪರಿಣಾಮ ಶಿಕಾರಿಪಾಳ್ಯ ಗ್ರಾಮದಲ್ಲಿ ಮತ್ತು ಅದಕ್ಕೆ ಹೊಂದಿಕೊಂಡಿರುವ ವಸತಿ ಸಮುಚ್ಚಯಗಳ ರಸ್ತೆಗಳಲ್ಲಿ ತ್ಯಾಜ್ಯ ತುಂಬಿಕೊಂಡಿರುತ್ತದೆ.

ಆನೇಕಲ್ ತಾಲ್ಲೂಕಿನ ಹುಲಿಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಸ್. ಬಿಂಗೀಪುರ ಗ್ರಾಮದ ಸ.ನಂ. 179 ರಲ್ಲಿ 1 ಎಕರೆ ವಿಸ್ತೀರ್ಣದಲ್ಲಿ ಘನ ತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣ ಮಾಡಿದ್ದು, ಗ್ರಾಮ ಪಂಚಾಯಿತಿ ಮತ್ತು ಸ್ತ್ರೀಶಕ್ತಿ ಸಹಕಾರ ಸಂಘಗಳಿಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯ 10 ಗ್ರಾಮಗಳಲ್ಲಿಯೂ ಪ್ರತಿ ದಿನ ತ್ರಿಚಕ್ರ ವಾಹನ ಮತ್ತು ನಾಲ್ಕು ಚಕ್ರದ ವಾಹನಗಳಲ್ಲಿ ಮನೆ, ಮನೆ ಹಾಗೂ ರಸ್ತೆಯ ಬದಿಯಲ್ಲಿರುವ ತ್ಯಾಜ್ಯವನ್ನು ಸಂಗ್ರಹಿಸಿ ಗ್ರಾಮ ಪಂಚಾಯಿತಿ ಘನ ತ್ಯಾಜ್ಯ ಘಟಕದಲ್ಲಿ ಸಮರ್ಪಕವಾಗಿ ತ್ಯಾಜ್ಯ ವಿಲೇವಾರಿ ಮಾಡಲಾಗುತ್ತಿದೆ.

ಹಬ್ಬ-ಹರಿದಿನಗಳಲ್ಲಿ ಮತ್ತು ಖಾಸಗಿ ವ್ಯಕ್ತಿಗಳು ಸಂಗ್ರಹಿಸುವ ತ್ಯಾಜ್ಯದಿಂದ ಈ ಸಮಸ್ಯೆ ಉಂಟಾಗಿದ್ದು, ಗ್ರಾಮ ಪಂಚಾಯಿತಿಯು ಎಲ್ಲಾ ತ್ಯಾಜ್ಯವನ್ನು ತುರ್ತಾಗಿ ಸ್ವಚ್ಛಗೊಳಿಸಿ ಘನ ತ್ಯಾಜ್ಯ ಘಟಕಕ್ಕೆ ವಿಲೇವಾರಿ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಈ ರೀತಿಯ ಸಮಸ್ಯೆಯಾಗದಂತೆ ಸಮರ್ಪಕವಾಗಿ ತ್ಯಾಜ್ಯ ವಿಲೇವಾರಿ ಮಾಡಲಾಗುವುದು. ಈ ಸಮಸ್ಯೆಯನ್ನು ಪರಿಹರಿಸಲು ಗ್ರಾಮ ಪಂಚಾಯಿತಿ ಸಿಬ್ಬಂದಿಗಳನ್ನು ಆ ಸ್ಥಳಗಳಲ್ಲಿ ನಿಗಾವಹಿಸುವಂತೆ ಕ್ರಮಕೈಗೊಳ್ಳಲಾಗಿದ್ದು, ಸಿಸಿ ಕ್ಯಾಮರಾಗಳನ್ನು ಅಳವಡಿಸಲು ಗ್ರಾಮ ಪಂಚಾಯಿತಿಯಿಂದ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಶಿಕಾರಿಪಾಳ್ಯ ಗ್ರಾಮಕ್ಕೆ ಮೂಲಭೂತ ಸೌಕರ್ಯಗಳಾದ ಕಾಂಕ್ರಿಟ್ ರಸ್ತೆ, ಒಳಚರಂಡಿ, ಕಾಂಕ್ರಿಟ್ ಚರಂಡಿ, ಶುದ್ಧ ಕುಡಿಯುವ ನೀರಿನ ಘಟಕ ಮತ್ತು ಬೀದಿ ದೀಪಗಳನ್ನು ಒದಗಿಸಲಾಗಿದೆ.

ಸಂಖ್ಯೆ:RDPR 359 GPA 2023.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.